ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ.

6ನೇ ಅಡ್ಡರಸ್ತೆ. ಮಲ್ಲೇಶ್ವರಂ. ಬೆಂಗಳೂರು – 560003

**********************************************************************************

ಸಂಖ್ಯೆ : ಸಿ1/ಎಸ್/ಎಸ್.ಎಸ್.ಎಲ್.ಸಿ/ಜುಲೈ–21/ಮಾ.ಪ್ರ.ಪ/01/2020–21 ದಿನಾಂಕ : 01.07.2021

– ಸುತ್ತೋಲೆ –

ವಿಷಯ : ಜುಲೈ 2021ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಂಬಂಧಿಸಿದಂತೆ ಬಹು ಆಯ್ಕೆ ಪ್ರಶ್ನೆ ಆಧಾರಿತ ಮಾದರಿ ಪ್ರಶ್ನೆಪತ್ರಿಕೆಗಳನ್ನು ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಬಗ್ಗೆ.

ಉಲ್ಲೇಖ : ಈ ಕಚೇರಿ ಸಮಸಂಖ್ಯೆ ಪತ್ರ ದಿನಾಂಕ 11.06.2021, 16.06.2021 ಮತ್ತು 18.06.2021

*****

ಈ ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಪ್ರಸಕ್ತ ವರ್ಷ ಕೋವಿಡ್–19 ವ್ಯಾಪಕವಾಗುತ್ತಿರುವ ಹಿನ್ನೆಲೆಯಲ್ಲಿ ಜೂನ್ 21, 2021 ರಿಂದ ಪ್ರಾರಂಭವಾಗಬೇಕಿದ್ದ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಮುಂದೂಡಲಾಗಿತ್ತು. ಪ್ರಸ್ತುತ ಪರೀಕ್ಷಾ ವಿಧಾನವನ್ನು ಸರಳೀಕರಿಸಿ ಎರಡು ದಿನಗಳಲ್ಲಿ ಪರೀಕ್ಷೆಯನ್ನು ಸೀಮಿತಗೊಳಿಸಿ, ಬಹು ಆಯ್ಕೆ ಪ್ರಶ್ನೆ (Multiple Choice Question Based) ಮಾದರಿಯಲ್ಲಿ ವಿಷಯವಾರು ಗರಿಷ್ಠ 40 ಅಂಕಗಳಿಗೆ ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದ್ದು, ಅದರ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಲವು ಭಾಷಾ ವಿಷಯಗಳ ಒಂದು ಸೆಟ್ ಮತ್ತು ಕೋರ್ ವಿಷಯಗಳ (ಗಣಿತ, ವಿಜ್ಞಾನ ಮತ್ತು ಸಮಾಜ ವಿಜ್ಞಾನ) ಎರಡು ಸೆಟ್ ಬಹು ಆಯ್ಕೆ ಪ್ರಶ್ನೆ ಆಧಾರಿತ ಮಾದರಿ ಪ್ರಶ್ನೆಪತ್ರಿಕೆಗಳನ್ನು ಮತ್ತು ಉತ್ತರಗಳನ್ನು ಶೇಡ್ ಮಾಡುವ O.M.R ಗಳ ಮಾದರಿಯನ್ನು ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು.

ಮುಂದುವರೆದು ಪ್ರಸ್ತುತ ಎಲ್ಲಾ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ **ಉಳಿದ ಎಲ್ಲಾ ಭಾಷಾ ವಿಷಯಗಳ, ಎನ್.ಎಸ್.ಕ್ಯೂ.ಎಫ್ ವಿಷಯಗಳ, ಪರ್ಯಾಯ ವಿಷಯಗಳ ಹಾಗೂ ಕಿರಿಯ ತಾಂತ್ರಿಕ ವಿಷಯಗಳ (JTS) ಮಾದರಿ ಪ್ರಶ್ನೆಪತ್ರಿಕೆ ಮತ್ತು O.M.R ಗಳ ಮಾದರಿ**ಯನ್ನು ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದ್ದು, ಈ ಪ್ರಶ್ನೆಪತ್ರಿಕೆಗಳು ಮತ್ತು ಒ.ಎಂ.ಆರ್‌ಗಳನ್ನು ಡೌನ್‌ಲೋಡ್ ಮಾಡಿಕೊಂಡು ವಿದ್ಯಾರ್ಥಿಗಳ ಅಭ್ಯಾಸಕ್ಕೆ ಅನುವಾಗುವಂತೆ ಕ್ರಮವಹಿಸಲು ಸೂಚಿಸಿದೆ.

ಮಂಡಳಿಯ ವೆಬ್‌ಸೈಟ್ ವಿಳಾಸ – **https://sslc.karnataka.gov.in/ → Documents → SSLC → Question Papers → Model Question Papers →** M.C.Q Model Question Papers for July- 2021 SSLC Examination

(ಸುಮಂಗಲ. ವಿ) 1/7

ನಿರ್ದೇಶಕರು, ಪರೀಕ್ಷೆಗಳು

ಅಗತ್ಯಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಮಂಡಳಿಯ ಶಾಲಾ ಲಾಗಿನ್ ಮೂಲಕ